ಶ್ರೀ ನಿರಾಣಿ ಮುರಗೇಶ್ ರುದ್ರಪ್ಪ (ಬೀಳಗಿ)120(227)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಡಾ: ನಂಜುಂಡಪ್ಪ ವರದಿಯನುಸಾರ ಅತೀ ಹಿಂದುಳಿದ ತಾಲ್ಲೂಕೆಂದು ಘೋಷಣೆಯಾದ ಬೀಳಗಿ ತಾಲ್ಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗ ಳಾವುವು?

ಆ) ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಈ ತಾಲ್ಲೂಕಿಗೆ ಸುವರ್ಣ ಗ್ರಾಮೋದಯ ಗ್ರಾಮಗಳನ್ನಾಗಿ ಆಯ್ಕೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ವಿಶೇಷ ಗ್ರಾಮಾಭಿವೃದ್ಧಿ ಯೋಜನೆ ಜಾರಿಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದು, ಕೃಷಿ ಸಂಪನ್ಮೂಲ ಹೆಚ್ಚಿಸಲು ವಿಶೇಷ ಸಹಾಯ ಸೌಲಭ್ಯ ಒದಗಿಸುವುದು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿ ಪಡಿಸಲು ಸರ್ಕಾರ ಯೋಜನೆಗಳನ್ನು ಹಾಕಿಕೊಂಡಿರುವುದೇ?

ಶ್ರೀ ಸಿ.ಎಂ.ಉದಾಸಿ

ಅ) ಡಾ:ನಂಜುಂಡಪ್ಪ ವರದಿಯನುಸಾರ ಅತೀ ಹಿಂದುಳಿದ ತಾಲ್ಲೂ ಕೆಂದು ಘೋಷಣೆಯಾದ ಬೀಳಗಿ ತಾಲ್ಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ರಾಜ್ಯದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುವ ಸಾಮಾನ್ಯ ಯೋಜನೆಗಳೊಂದಿಗೆ ಹೊಸದಾಗಿ 1)ವಿಶ್ವ ಬ್ಯಾಂಕ್ ನೆರವಿನ ಗ್ರಾಮ ಸ್ವರಾಜ್, 2) ಸುವರ್ಣ ಗ್ರಾಮೋದಯ, 3) 8 ವರ್ಷಗಳ ವಿಶೇಷ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲಾಗಿದೆ.

ಆ) ಸುವರ್ಣ ಗ್ರಾಮೋದಯ ಯೋಜನೆಯಡಿ ಬೀಳಗಿ ತಾಲ್ಲೂಕಿಗೆ ನಿಗದಿಪಡಿಸಿರುವ ಜನಸಂಖ್ಯೆಗನುಗುಣವಾಗಿ 2006–07ನೇ ಸಾಲಿಗೆ 6 ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಪ್ರತಿ ವರ್ಷ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟಾರೆ 1,000 ಗ್ರಾಮಗಳನ್ನು ಆಯ್ಕೆ ಮಾಡುವ ಉದ್ದೇಶವಿದ್ದು, ಮುಂದಿನ ಆಯ್ಕೆ ಪ್ರಕ್ರಿಯೆಯಲ್ಲಿ ಬಾಳಗಿ ತಾಲ್ಲೂಕಿನ ಮತ್ತಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗುವುದು.

ಇ) ವಿಶೇಷ ಗ್ರಾಮಾಭಿವೃದ್ಧಿ ಯೋಜನೆ ಜಾರಿಯಲ್ಲಿರುವುದಿಲ್ಲ.

ಈ) ಬೀಳಗಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ 8 ವರ್ಷಗಳ ವಿಶೇಷ ಅಭಿವೃದ್ಧಿ ಯೋಜನೆಯಡಿ 2007–08ನೇ ಸಾಲಿನಲ್ಲಿ ಬೀಳಗಿ–ಜಮಖಂಡಿ ರಸ್ತೆಯಿಂದ (ಎಂ.ಡಿ.ಆರ್.ಸಂಖ್ಯೆ 2 ರಿಂದ) ಶಿವಪುರದವರೆಗೆ 2.60 ಕಿ.ಮೀ.ಉದ್ದದ ರಸ್ತೆಯನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಅಲ್ಲದೆ ಸುವರ್ಣ ಗ್ರಾಮೋದಯ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಈ ಸೌಲಭ್ಯಗಳನ್ನು ಒದಗಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.